# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 05(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 08.07.2022 ರ
## ಸಭಾ ನಡುವಳಿ

ದಿನಾಂಕ: 08.07.2022 ರಂದು ಬೆಳ್ಳಿಗೆ 11.00 ಗಂಟೆಗೆ ವಾರ್ಡ್ ನಂ.05 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ದಾಸರಹಳ್ಳಿ ಬಿಬಿಎಂಪಿ ಕಛೇರಿ ಆರಣದಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಕೆ.ಎಲ್ ಗಂಗಾಧರಯ್ಯ | ಸಹಾಯಕ ನಿರ್ದೇಶಕರು, ನಗರ ಯೋಜನೆ, ಮತ್ತು ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ |
| 2 | ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಶ್ರೀ ಮುರಳಿಧರ್ ಎಸ್ | ವೈದ್ಯಾಧಿಕಾರಿಗಳು, ಪ್ರಾ. ಆರೋಗ್ಯ ಕೇಂದ್ರ ಅಗ್ರಹಾರ ಬಡಾವಣೆ |
| 4 | ಶ್ರೀ ಪಿ.ಎಂ ಮಲೆಯಾದ್ರಿ | ತೋಟಗಾರಿಕೆ ನಿರೀಕ್ಷಕರು, ಯಲಹಂಕ ವಲಯ |
| 5 | ಶ್ರೀ ಸೋಮಶೇಖರ್ | ವ್ಯವಸ್ಥಾಪಕರು, ಕಂದಾಯ ಉಪ ವಿಭಾಗ |
| 6 | ಶ್ರೀ ಮುತ್ತುರಾಜು ಕೆ.ಪಿ | ಅರಣ್ಯ ವಿಭಾಗ, ಬಿಬಿಎಂಪಿ ಬೆಂಗಳೂರು |
| 7 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 05 |
| 8 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 05 |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. ಡಾ॥ ಮುರಳಿಧರ್, ವೈದ್ಯಾದಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿನ ಅಗ್ರಹಾರ ಬಡಾವಣೆಯ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಅವಶ್ಯಕ ಪರಿಕರಗಳನ್ನು ಖರೀದಿಸಲು ಅನುಮತಿ ಕೊಡಿಸಿಕೊಡಲು ಮತ್ತೊಮ್ಮೆ ಕೋರಿದರು.
2. ಅಶ್ವಥ್ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚುವರಿ ಒಣ ಕಸ ಸಂಗ್ರಹಿಸಲು ಹೆಚ್ಚುವರಿ ಆಟೋಗಳನ್ನು ಹಾಗೂ ಬ್ಲಾಕ್ ಸ್ಪಾಟ್‌ಗಳ ಸ್ಥಳಗಳಲ್ಲಿ ಸೌಂದರೀಕರಣ ಮಾಡಲು ಬೇಕಾದ ಸಾಮಗ್ರಿಗಳನ್ನು ಒದಗಿಸುವಂತೆ ಕೋರಿರದರು.

3. ಮಳೆಗಾಲವಾದ್ದರಿಂದ ವಾರ್ಡ್ ವ್ಯಾಪ್ತಿಯಲ್ಲಿ ರಾತ್ರಿ ಪಾಳಿಯ ನಿಯಂತ್ರಣ ಕೊಠಡಿಯಲ್ಲಿ ಗ್ಯಾಂಗ್‌ಮೆನ್ ಹಾಗೂ ವಾಟರ್‌ಮ್ಯಾನ್‌ಗಳು ಕಡ್ಡಾಯವಾಗಿ ಕಾರ್ಯನಿರ್ವಹಿಸಲು ಸೂಚನೆ ನಿಡುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು.



Scanned by CamScanner

4. ಬೀದಿ ದೀಪಗಳ ನಿರ್ವಹಣೆ ಬಗ್ಗೆ ಮಾತನಾಡಿ ವಾರ್ಡ್ ವ್ಯಾಪ್ತಿಯ ಹಲವಾರು ಕಡೆಗಳಲ್ಲಿ ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರ ದೂರವಾಣಿ ಸಂಖ್ಯೆಯನ್ನು ಪ್ರದರ್ಶನ ಮಾಡುವಂಥೆ ಸೂಚನೆ ನೀಡಲಾಯಿತು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡಲು ಸೂಚನೆ ನಿಡಲಾಯಿತು ಈ ಬಗ್ಗೆ ವಾರ್ಡ್‌ಗೆ ಸುಮಾರು 2000 ಹೊಸದಾಗಿ ವಿದ್ಯುತ್ ಬಲ್ಬ್‌ಗಳನ್ನು ಒದಗಿಸುವಂತೆ ಕ್ರಮ ವಹಿಸಲು ಪ್ರಸ್ತಾವನೆ ಸಲ್ಲಿಸಲು ಸೂಚನೆ ನೀಡಲಾಯಿತು
5. ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ /ವಾಹನ ಸವಾರರ ಓಡಾಟಕ್ಕೆ ತೊಂದರೆಯಾಗುವಂತೆ ರಸ್ತೆ ಮಧ್ಯ, ಪಾದಚಾರಿ ಮಾರ್ಗ ಹಾಗೂ ಚರಂಡಿಗಳಲ್ಲಿ ಇರುವ ವಿದ್ಯುತ್ ಕಂಬಗಳನ್ನು ಕೂಡಲೇ ರಸ್ತೆ ಬದಿಗೆ ಸ್ಥಳಾಂತರ ಮಾಡಲು ಕ್ರಮ ವಹಿಸಲು ಬೆಸ್ಕಾಂ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.
6. ವಾರ್ಡ್ ವ್ಯಾಪ್ತಿಯ ಎಂ.ಸಿ.ಇ.ಸಿ.ಹೆಚ್.ಎಸ್ ಬಡಾವಣೆಯ ನಿವಾಸಿಯಾದ ಶ್ರೀ ಸಂಪತ್ ರವರು ಸ್ವಯಂ ಮನೆಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಹಸಿ ಕಸ ಮತ್ತು ಒಣಕಸವಾಗಿ ಬೇರ್ಪಡಿಸಿ ಹಸಿಕಸವನ್ನು ಮನೆಯಲ್ಲಿಯೇ ಸಾವಯವ ಗೊಬ್ಬರ ಮಾಡಿ ಮನೆಯ ಕೈತೋಟಕ್ಕೆ ಉಪಯೋಗಿಸಿಕೊಳ್ಳುತ್ತಿರುವುದಾಗಿ ಸಭೆಗೆ ತಿಳಿಸಿದರು ಈ ಬಗ್ಗೆ ಮಾನ್ಯ ಅಧ್ಯಕ್ಷರು ಮಾತನಾಡಿ ಶ್ರೀ ಸಂಪತ್ ರವರಿಗೆ ಪ್ರಶಂಶೆ ವ್ಯಕ್ತಪಡಿಸಿದರು
7. ಎಂ.ಸಿ.ಇ.ಸಿ.ಹೆಚ್.ಎಸ್ ಬಡಾವಣೆಯ 5ನೇ ಮುಖ್ಯರಸ್ತೆಯಲ್ಲಿರುವ ಉದ್ಯಾನವನಕ್ಕೆ ಪ್ಯಾರಪೆಟ್ ವಾಲ್ ನಿರ್ಮಿಸಿ ಸುತ್ತಲು ಫೆನ್ಸಿಂಗ್ ನಿರ್ಮಾಣ ಮಾಡಿ ಈಗಿರುವ ಗೇಟ್ ಮುರಿದಿರುವುದರಿಂದ ಹೊಸದಾಗಿ ಗೇಟ್ ನಿರ್ಮಾಣ ಮಾಡಲು ಕೋರಿದರು.
8. ಚೊಕ್ಕನಹಳ್ಳೀ ಕ್ಯಾಪಿಟಲ್ ಸ್ಕೂಲ್ ಬಳಿ ಮ್ಯಾನ್ ಹೋಲ್ ಉಕ್ಕಿ ಹರಿಯುತ್ತಿದ್ದು ಇದನ್ನು ಸರಿಪಡಿಸುವಂತೆ ಸಭೆಯಲ್ಲಿ ಕೋರಿದರು.
9. ಸಂಪಿಗೇಹಳ್ಳಿ ರೆಡಿಯನ್ಸ್ ಅಪಾರ್ಟ್‌ಮೆಂಟ್‌ನವರು ಮಳೆ ನೀರನ್ನು ಸಂಪಿಗೇಹಳ್ಳಿ ಸ್ಮಶಾನಕ್ಕೆ ಹರಿದು ಹೋಗುವಂತೆ ಮಾಡಿರುವುದರಿಂದ ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸುವಂತೆ ಕೋರಿದರು.
10. ಕೆಂಪೇಗೌಢ ರವರು ಮಾತನಾಡಿ ರಾಯಲ್ ಎನ್‌ಕ್ಲೇವ್ ಬಡಾವಣೆಯಲ್ಲಿ ಬೀದಿ ದೀಪಗಳಿಗೆ ವಿದ್ಯುತ್ ಮೀಟರ್‌ಗಳನ್ನು ಅಳವಡಿಸಲು ಹಾಗೂ ಕಂಟ್ರೋಲ್ ವೈರ್‌ಗಳನ್ನು ಅಳವಡಿಸುವಂತೆ ಕೋರಿದರು.
11. ಅಗ್ರಹಾರ ಬಡಾವಣೆ –ತಿರುಮೇನಹಳ್ಳಿ ಮುಖ್ಯರಸ್ತೆಯಲ್ಲಿ ಒಣಗಿದ ಮರ ಇದ್ದು ಇದನ್ನು ಕೂಡಲೇ ತೆರವುಗೊಳಿಸುವಂತೆ ಕೋರಿದರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್–19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾಸುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ಮುಂದಿನ ಸಭೆಗೆ ಕಡ್ಡಾಯವಾಗಿ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವಂಥೆ ಕ್ರಮ ವಹಿಸಲು ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 05(ಜಕ್ಕೂರು)

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 05, (ಜಕ್ಕೂರು)

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.



Scanned by CamScanner